# ಮಿದುಳು ಆರೋಗ್ಯಕ್ಕೆ ಕೆಎಬಿಎಚ್ಐ (KABHI) ಸ್ಥಾಪನೆ!





ರಾಜ್ಯದಲ್ಲಿ ಮಿದುಳು ಆರೋಗ್ಯಕ್ಕೆ ಸಂಬಂಧಿಸಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಕರ್ನಾಟಕ ಬ್ರೈನ್ ಹೆಲ್ತ್ ಇನಿಶಿಯೇಟೀವ್(ಕೆಎಬಿಎಚ್ಐ) ಕಾರ್ಯಕ್ರಮ ಆರಂಭಿಸಲಾಗಿದೆ. ಮೂರ್ಛೆ ರೋಗ, ಮರೆವಿನ ಕಾಯಿಲೆ, ಪಾರ್ಶ್ವವಾಯು ಮತ್ತು ತಲೆನೋವಿನಂತಹ ನರವೈಜ್ಞಾನಿಕ ಕಾಯಿಲೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಈ ವಿಭಾಗ ಕಾರ್ಯನಿರ್ವಹಿಸುತ್ತಿದ್ದು, ಸಂಸ್ಥೆಯಿಂದಾಗಿ ರಾಜ್ಯಾದ್ಯಂತ ಅನೇಕ ಕುಟುಂಬಗಳು ಸಹಕಾರ ಪಡೆದಿವೆ. ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ(ನಿಮ್ಹಾನ್ಸ್)ನ ತಾಂತ್ರಿಕ ಸಹಯೋಗದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಈ ವಿಭಾಗ ರಾಜ್ಯಾದ್ಯಂತ ಮಿದುಳಿಗೆ ಸಂಬಂಧಿಸಿದ ಯಾವುದೇ ಕಾಯಿಲೆಯನ್ನು ಆರಂಭದಲ್ಲೇ ಗುರುತಿಸುವುದು, ಅಗತ್ಯ ಚಿಕಿತ್ಸೆಗೆ ಪೂರಕ ವ್ಯವಸ್ಥೆ ಕಲ್ಪಿಸುವ ಕೆಲಸವನ್ನು ಮಾಡುತ್ತಿದೆ. ಜತೆಗೆ, ಜನರಲ್ಲಿ ಮಿದುಳು ಆರೋಗ್ಯಕ್ಕೆ ಸಂಬಂಧಿಸಿದಂತೆ ಅಗತ್ಯ ಜಾಗೃತಿ ಮೂಡಿಸುತ್ತಿದೆ.

ಕರ್ನಾಟಕ ಬ್ರೈನ್ ಹೆಲ್ತ್ ಇನಿಶಿಯೇಟೀವ್ (ಕೆಎಬಿಎಚ್ಐ) ಕಾರ್ಯಕ್ರಮದಿಂದಾಗಿ ರಾಜ್ಯಾದ್ಯಂತ ಲಕ್ಷಾಂತರ ರೋಗಿಗಳು ನೆರವು ಪಡೆದಿದ್ದಾರೆ. ಕೇವಲ ಸ್ಥಳೀಯ ಆಸ್ಪತ್ರೆ ಮಾತ್ರವಲ್ಲದೇ, ಟೆಲಿ ನ್ಯೂರಾಲಜಿ ಮೂಲಕ ಅನೇಕ ಮಂದಿ ಸಲಹೆಗಳನ್ನು ಪಡೆದುಕೊಂಡಿದ್ದಾರೆ. 2024ರ ಏಪ್ರಿಲ್‌ನಿಂದ ಕಳೆದ ಮಾರ್ಚ್‌ವರೆಗೆ 3.38ಲಕ್ಷ ತಪಾಸಣೆ, 1.10ಲಕ್ಷ ನರರೋಗಿಗಳಿಗೆ ಚಿಕಿತ್ಸೆಯನ್ನು ಈ ಕಾರ್ಯಕ್ರಮದ ಅಡಿಯಲ್ಲಿ ನೀಡಲಾಗಿದೆ. ಜತೆಗೆ, 2025ರ ಏಪ್ರಿಲ್‌ನಿಂದ ಡಿಸೆಂಬರ್ ತಿಂಗಳ ಕೊನೆಗೆ 1,33,030 ಜನರನ್ನು ತಪಾಸಣೆಗೊಳಪಡಿಸಿ, 85,929 ಮಂದಿಗೆ ಚಿಕಿತ್ಸೆಯನ್ನು ಒದಗಿಸಲಾಗಿದೆ. ಜತೆಗೆ, ರಾಜ್ಯಾದ್ಯಂತ ಬ್ರೈನ್ ಹೆಲ್ತ್ ಕ್ಲಿನಿಕ್‌ಗಳ ಮೂಲಕ ಚಿಕಿತ್ಸೆಗೆ ಅಗತ್ಯವುಳ್ಳವರಿಗೆ ಪೂರಕ ಸಲಹೆಗಳನ್ನು ಒದಗಿಸುತ್ತಾ, ಜಾಗೃತಿಯನ್ನು ಮೂಡಿಸುವ ಕೆಲಸವನ್ನು ಮಾಡಲಾಗುತ್ತದೆ.

### ಕಾರ್ಯಕ್ರಮದ ಉದ್ದೇಶವೇನು?

- ಜನರಲ್ಲಿ ನರವೈಜ್ಞಾನಿಕ ಕಾಯಿಲೆಗಳ ಅರಿವು ಹೆಚ್ಚಿಸುವುದು, ಆರಂಭಿಕ ಹಂತದಲ್ಲಿ ಈ ಕಾಯಿಲೆಗಳನ್ನು ಗುರುತಿಸುವುದು, ಸಮಯೋಚಿತ ಆರೈಕೆ ಮತ್ತು ಪುನರ್ವಸತಿ ಸೇವೆಗಳನ್ನು ಉತ್ತೇಜಿಸುವುದು.



ರಾಜ್ಯದ 33 ಜಿಲ್ಲಾ ಆಸ್ಪತ್ರೆಗಳಲ್ಲಿ ಮೆದುಳು ಆರೋಗ್ಯ ಕೇಂದ್ರಗಳನ್ನು ತೆರೆಯಲಾಗಿದೆ. ದೇಶದಲ್ಲಿ ಇದೊಂದು ಮಾದರಿ ಕಾರ್ಯಕ್ರಮವಾಗಿದೆ. ಮೆದುಳು ಹಾಗೂ ನರ ಸಮಸ್ಯೆಗಳಿಗೆ ರಾಜ್ಯದ ಜನರು ಬೆಂಗಳೂರಿನ ನಿಮ್ಹಾನ್ಸ್ ಗೆ ಬರಬೇಕಾಗಿತ್ತು. ಇದು ಹೆಚ್ಚಿನ ಒತ್ತಡ ನಿರ್ಮಾಣ ಮಾಡಿತ್ತು. ಈ ಒತ್ತಡವನ್ನು ಕಡಿಮೆ ಮಾಡುವುದರ ಜೊತೆಗೆ, ಜಿಲ್ಲಾ ಮಟ್ಟದಲ್ಲಿಯೇ ರೋಗಿಗಳಿಗೆ ಚಿಕಿತ್ಸೆ ನೀಡಲು ಮೆದುಳು ಆರೋಗ್ಯ ಕೇಂದ್ರಗಳನ್ನು ತೆರೆಯಲಾಗಿದೆ. ನಿಮ್ಹಾನ್ಸ್ ತಜ್ಞ ವೈದ್ಯರ ಸಲಹೆ ಪಡೆದುಕೊಂಡು ಜಿಲ್ಲಾ ಕೇಂದ್ರಗಳಲ್ಲಿಯೇ ಹೆಚ್ಚಿನ ಚಿಕಿತ್ಸೆ ನೀಡುವ ವ್ಯವಸ್ಥೆ ಕಲ್ಪಿಸಲಾಗಿದೆ.

**-ದಿನೇಶ್ ಗುಂಡೂರಾವ್,** ಸಚಿವರು, ಆರೋಗ್ಯ- ಕುಟುಂಬ ಕಲ್ಯಾಣ ಇಲಾಖೆ



ರಾಜ್ಯದಲ್ಲಿ ಮಿದುಳಿಗೆ ಸಂಬಂಧಿಸಿದಂತೆ ಪಾರ್ಶ್ವವಾಯು, ಮೂರ್ಛೆ ರೋಗ, ಮರೆವಿನ ಕಾಯಿಲೆ ಮತ್ತು ತಲೆನೋವು ಸೇರಿದಂತೆ ನರವೈಜ್ಞಾನಿಕ ಕಾಯಿಲೆಗಳಿಗೆ ಸ್ಥಳೀಯವಾಗಿ ಚಿಕಿತ್ಸೆ ಒದಗಿಸಿ, ಸಮರ್ಥವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಮಿದುಳು ಆರೋಗ್ಯ ಕೇಂದ್ರಗಳನ್ನು ತೆರೆಯಲಾಗಿದೆ. ಪ್ರತಿ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು, ಪಿಸಿಯೋಥೆರಪಿಸ್ಟ್, ಸ್ಪೀಚ್ ಥೆರಪಿಸ್ಟ್, ಮನಶ್ಶಾಸ್ತ್ರಜ್ಞರು, ನರ್ಸ್ ಮತ್ತು ಜಿಲ್ಲಾ ಸಂಯೋಜಕರನ್ನು ಒದಗಿಸಲಾಗಿದೆ.

**-ಹರ್ಷಗುಪ್ತ,** ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ